ಫಾರೆಸ್ಟ್ ಇಲಾಖಾ.

ಸಂದಲ್ ಹರಾಜ್ ನೋಟಿಫಿಕೇಷನ್.

ತಾರೀಖು 18ನೆ ಆಗಸ್ಟು 1904ನೆ ಇಸವಿ.

ಇದರಿಂದ ಸಮಸ್ತ ಜನರಿಗು ತಿಳಿಯಪಡಿಸುವದೇನಂದರೆ :—ಮೈಸೂರು ಸರಕಾರದ ಶ್ರೀಗಂಧದ ಸಾಲೆಯಾನ ನಡಿಯತಕ್ಕ ಹರಾಜು ಈ ಕೆಳಗೆ ನಮೂದಿಸಿರುವ ಕೋಠಿಗಳಲ್ಲಿ ಅದರದರ ಬಾಜುದಲ್ಲಿ ನಮೂದಿಸಿರುವ ತಾರೀಖುಗಳಲ್ಲಿ ಡಿಸ್ಟ್ರಿಕ್ಟು ಡೆಪ್ಯುಟಿ ಕಮಿಷನರು ಅಥವಾ ಅವರಿಂದ ನೇಮಿಸಲ್ಪಡುವ ಇತರ ಆಫಿಸರು ಮತ್ತು ಡಿಸ್ಟ್ರಿಕ್ಟು ಫಾರೆಸ್ಟು ಆಫಿಸರುಗಳಿಂದ ನಡಿಸಲ್ಪಡುವದು :—

ಡಿಸ್ಟ್ರಿಕ್ಟು.	ಕೋಠಿ.	ಹರಾಜು ತಾರೀಖು.	ಟನ್ ಗಳು ಹಂಡ್ರೆಡ್ ವೇಟ್	ಷರಾ.
ಮೈಸೂರು ...	ಹುಣಸೂರು ...	1904ನೆ ಇಸವಿ ನವಂಬರ್ ತಾರೀಖು 19	500	
ಡಿಟೋ ...	ಶ್ರೀರಂಗಪಟ್ಟಣ ...	ಡಿಟೋ ಡಿಟೋ 23	240	
ಬೆಂಗಳೂರು ...	ಬೆಂಗಳೂರು	ಡಿಟೋ ಡಿಟೋ 26	120	ಕೋಲಾರ್ ಮತ್ತು ತುಮಕೂರು ಡಿಸ್ಟ್ರಿಕ್ಟು ಸಂದಲ್ ಸೇರಿರುತ್ತೆ.
ಹಾಸನ ...	ಹಾಸನ ..	1904ನೆ ಇಸವಿ ಡಿಸೆಂಬರ್ ತಾರೀಖು 1	200	
ಕಡೂರು ..	ಚಿಕ್ಕಮಗಳೂರು ..	ಡಿಟೋ ಡಿಟೋ 5	200	
ಡಿಟೋ ..	ತರೀಕೆರೆ ..	ಡಿಟೋ ಡಿಟೋ 8	250	
ಶಿವಮೊಗ್ಗ ..	ಶಿವಮೊಗ್ಗ ...	ಡಿಟೋ ಡಿಟೋ 12	440	ಕಡೂರು ಮತ್ತು ಚಿತ್ರದುರ್ಗ ಡಿಸ್ಟ್ರಿಕ್ಟು ಸಂದಲ್ ಸೇರಿರುತ್ತೆ.
ಡಿಟೋ ..	ಸಾಗರ ..	ಡಿಟೋ ಡಿಟೋ 15	175	
ಡಿಟೋ ..	ತೀರ್ಥಹಳ್ಳಿ ..	ಡಿಟೋ ಡಿಟೋ 19	175	ಕಡೂರು ಡಿಸ್ಟ್ರಿಕ್ಟು ಸಂದಲ್ ಸೇರಿರುತ್ತೆ.

2. ಪ್ರತಿಒಂದು ಕೋಠಿಯಲ್ಲಿಯು ಹರಾಜು ಮಾಡಲ್ಪಡುವ ಸಂದಲ್ ಲಾಟು ಮತ್ತು ಮೊತ್ತ ವಗೈರೆ ತಪಶೀಲು ಐಯಿಂದ ಇದೇ ಸಾಲ್ ಅಕ್ಟೋಬರು ಆಖೈರು ವಳಗಾಗಿ ಫಾಯಿಷು ಮಾಡಲ್ಪಡುತ್ತದೆ.

ಎಂ. ಮುತ್ತಣ್ಣ,
ಕನ್ಸರ್ವೇಟರ್ ಆಫ್ ಫಾರೆಸ್ಟ್ಸ್ ಇನ್ ಮೈಸೂರು.

ಬೆಂಗಳೂರು ಡಿಸ್ಟ್ರಿಕ್ಟು.

ಸ್ಥಿರಸ್ವತ್ತಿನ ಹರಾಜ್ ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧಪತ್ರಿಕೆ.

1. ಜೋಡಿ ಬಾಕೀದಾರರಾದ ನವರತ್ನ ಅಗ್ರಹಾರದ ವೆಂಕೋಬಾಚಾರ್ ವಗೈರೆಯಿಂದ ಬರಬೇಕಾದ ಜಮೀನ್ ಕಂದಾಯದ ಬಾಕೀಗಾಗಿ ಇದರಡಿ ನಮೂದಾಗುವ ಸ್ಥಿರಸ್ವತ್ತು ಬೆಂಗಳೂರು ಡಿಸ್ಟ್ರಿಕ್ಟು ದೇವನಹಳ್ಳಿ ತಾಲ್ಲೂಕು ನವರತ್ನ ಅಗ್ರಹಾರ ಗ್ರಾಮವನ್ನು ಸರ್ 1904ನೆ ಇಸವಿ ಡಿಸೆಂಬರ್ 20ನೆ ತಾರೀಖಿನಲ್ಲಿ ದೇವನಹಳ್ಳಿ ತಾಲ್ಲೂಕು ಕಚೇರಿಯಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟು ಇದೆ.

ಹರಾಜು ಆ ದಿವಸ ದಿವಿ 12 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ ಚಡದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1902—03ನೆ ಸಾಲಿಗೆ ಪೂರ್ತಿಯಾಗಿ * ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಫ್ಸೀಲ್ ಮೇರಿಗೆ ರೂಪಾಯಿ 129—10—9 ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜಿದಾರನು ಹರಾಜ್ ಮೊಬಲಗಿನ ಶೇಕಡಾ 25 ರೂಪಾಯಿಗಳನ್ನು ಡಿಪಾಜಿಟ್ಟು ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜು ಬಾಬತು ಬಾಕೀ ಮೊಬಲಗು ಹರಾಜ್ ತಾರೀಖು ಲಾಗಾಯಿತು 15 ದಿವಸಗಳಲ್ಲಿ ಪಾವತೀ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ಟು ಮೊಬಲಗನ್ನು ಹಾಜರ್ಮಾಡಿದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

313

1751

ಸ್ಥಿರಸ್ವತ್ತಿನ ಹರಾಜ್ ಬಗ್ಯೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧಪತ್ರಿಕೆ.

1. ಗುತ್ತಾ ಬಾಕೀದಾರನಾದ ಬೆಂಗಳೂರು ಗ್ರಾಮದ ಲಕ್ಷ್ಮೀನಾರಣಪ್ಪನಿಂದ ಬರಬೇಕಾದ ಜಮೀನ್ ಕಂದಾಯದ ಬಾಕೀಗಾಗಿ ಇದರಡಿ ನಮೂದಾಗುವ ಸ್ಥಿರಸ್ವತ್ತು ಬೆಂಗಳೂರು ಡಿಸ್ಟ್ರಿಕ್ಟು ದೇವನಹಳ್ಳಿ ತಾಲ್ಲೂಕು ಕಾಯಂಗುತ್ತಾ ಬೋಯಿಲಹಳ್ಳಿ ಗ್ರಾಮವನ್ನು ಸನ್ 1904ನೆ ಇಸವಿ ಡಿಸೆಂಬರ್ ಮಾಹೆ 23ನೆ ತಾರೀಖಿನಲ್ಲಿ ದೇವನಹಳ್ಳಿ ತಾಲ್ಲೂಕು ಕಛೇರಿಯಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟು ಇದೆ.

ಹರಾಜು ಆ ದಿವಸ ದಿವಿ 12 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ ಚಡದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1902-03 & 04ನೆ ಸಾಲಿಗೆ ಪೂರ್ತಿಯಾಗಿ * ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಪ್ಸೀಲ್ ಮೇರಿಗೆ ರೂಪಾಯಿ 147—6—0 ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜ್‌ದಾರನು ಹರಾಜ್ ಮೊಬಲಗಿನ ಶೇಕಡಾ 25 ರೂಪಾಯಿಗಳನ್ನು ಡಿಪಾಜಿಟ್ಟು ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜು ಬಾಬತು ಬಾಕೀ ಮೊಬಲಗು ಹರಾಜ್ ತಾರೀಖು ಲಾಗಾಯತು 15 ದಿವಸಗಳಲ್ಲಿ ಪಾವತೀ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ಟು ಮೊಬಲಗನ್ನು ಹಾಜರ್ಮಾಡಿದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ಟು ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕೀ ಮೊಬಲಗು ಪಾವತಿ ಮಾಡಲ್ಪಡದೇ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಃ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸವಾಲ್ ಮಾಡತಕ್ಕ ಜನಗಳು ಖುದ್ದು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೆಯೋ ಯಾ ಏಜಂಟು ಯಾ ಮುತಾಲೀಕರಾಗಿ ಸವಾಲ್ ಮಾಡುತ್ತಾರೆಯೋ ಎಂಬ ಅಂಶವನ್ನು ತಿಳಿಸಬೇಕೆಂತಲೂ, ಇತರರಿಗೋಸ್ಕರ ಮುತಾಲೀಕರಾಗಿ ಸವಾಲ್ ಮಾಡುವ ಸಂದರ್ಭದಲ್ಲಿ ಅಂಥಾ ತಮ್ಮ ಎಜಮಾನರಿಂದ ಸಹಿ ಮಾಡಲ್ಪಟ್ಟ ಲಿಖಿತವಾದ ಅಧಿಕಾರ ಪತ್ರಿಕೆಯನ್ನು ಹಾಜರ್ ಮಾಡುವಂತೆಯೂ ಕೇಳಲ್ಪಡಬಹುದು. ಅದನ್ನು ಅವರು ಹಾಜರ್ಮಾಡದೆ ಹೋದಲ್ಲಿ ಅವರ ಸವಾಲುಗಳು ತಿರಸ್ಕರಿಸಲ್ಪಡಬಹುದು.

6. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕೀದಾರನಾಗಲೀ ಆತನ ತರಫಿನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲೀ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ, ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

7. ಹರಾಜು ಡೆಪ್ಯುಟಿ ಕಮಿಷನರವರಿಂದ ಮಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

8. ಹರಾಜಿನಲ್ಲಿ ತೆಗದುಕೊಂಡವರು ಹರಾಜ್ ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿದ ಮೇಲೆ ಡೆಪ್ಯುಟಿ ಕಮಿಷನರವರಿಂದ ಹರಾಜು ಮಂಜೂರ್ಮಾಡಲ್ಪಟ್ಟ ಕೂಡ್ಲೆ, ಹರಾಜುದಾರ್ರು ಸದರೀ ಸ್ವತ್ತಿನ ಸ್ವಾಧೀನವನ್ನು ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು, ಡೆಪ್ಯುಟಿ ಕಮಿಷನರವರಿಂದ ಸೈನ್ ಮೊಹರ್ ಮಾಡಲ್ಪಟ್ಟ ಒಂದು ಹರಾಜ್ ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯೂ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಖಾಲಿತ್ಯಗಳಿಗೆ ಗವರ್ನಮೆಂಟಿನವರು ಜವಾಬ್ದಾರ್ರಲ್ಲವೆಂಬ ಅಂಶವನ್ನು ಸ್ಪಷ್ಟವಾಗಿ ತಿಳಿದಿರತಕ್ಕದ್ದು.

9. ಹರಾಜಿನಿಂದ ತಮಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜ್ ತಾರೀಖು ಲಾಗಾಯತು 30 ದಿವಸಗಳಲ್ಲಿ ಡೆಪ್ಯುಟಿ ಕಮ್ಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾನೂನಿನಿಂದ ವಿಧಿಸಲ್ಪಟ್ಟ ವಾಯಿದೆಯಲ್ಲಿ ಗವರ್ನಮೆಂಟಿನವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪ್ಪೀಲಿನಲ್ಲಿ ಆಗುವ ಫೈಸಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು:—

ತಾಲ್ಲೂಕು.	ಹೋಬಳಿ.	ಗ್ರಾಮ.	ಬಾಕೀದಾರ್ರ ಹೆಸರು.	ಸ್ವತ್ತಿನ ತಪ್ಸೀಲ್.									ಸರ್ಕಾರಕ್ಕೆ ಬರಬೇಕಾದ ನೋಟಿಸ್ ಫೀ ವಗೈರೆ ಸಹಿತವಾದ ಬಾಕೀ ಮೊಬಲಗು.			
				ಕಟ್ಟಡಗಳು.		ಜಮೀನು.										
				ಕಟ್ಟಡದ ಹೆಸರು.	ಅಂದಾಜಾ ಕಿಮ್ಮತ್ತು.	ನಂಬರ್ ಅಥವಾ ಜಮೀನಿನ ಹೆಸರು.	ಖುಷ್ಕೀ, ತರೀ ಅಥವಾ ಬಾಗಾಯತು.	ವಿಸ್ತೀರ್ಣ.		ಆಕಾರ.						
					ರೂ. ಆ. ಪೈ.			ಎ.	ಗು.	ರೂ.	ಆ.	ಪೈ.	ರೂ.	ಆ.	ಪೈ.	
ದೇವನಹಳ್ಳಿ	ಜಾಲ	ಬೋಯಿಲಹಳ್ಳಿ	ಲಕ್ಷ್ಮೀನಾರಣಪ್ಪ	ಪೂರಾಗ್ರಾಮ	200 0 0	ಗ್ರಾಮ ಪೂರಾ	ಖುಷ್ಕಿ ..	162	3	150	0	0				
							ತರಿ	...	...	...	...	...	146	14	0	ಬಾಕಿ
							ಬಾಗಾಯತು .	2	23	12	0	0	1	8	0	ಪ್ರೋಸೆಸ್ ಫೀ
							ಪರಂಪೋಕು.	199	32	3	0	0				
							ಜುಮ್ಲಾ	36[illegible]	18	165	0	0	147	6	0	ಜುಮ್ಲಾ

ಚಕ್ಕು ಬಂದಿ.
ಪೂರ್ವಕ್ಕೆ—ಬಂಡಕೊಡಿಗಿಹಳ್ಳಿ ಎಲ್ಲೆ
ಪಶ್ಚಿಮಕ್ಕೆ—ಮಾಶಿಗಾನಹಳ್ಳಿ ಎಲ್ಲೆ
ಉತ್ತರಕ್ಕೆ—ಬೇಗೂರು ಎಲ್ಲೆ
ದಕ್ಷಿಣಕ್ಕೆ—ಬಂಡಕೊಡಿಗಿಹಳ್ಳಿ ಎಲ್ಲೆ

---

* ಈ ಬಾಕೀ ಇರುವ ಪಟ್ಟಿಗೆ ಸಂದರ್ಭಾನುಸಾರ [illegible] ಮಾಡತಕ್ಕದ್ದು.

ಸ್ಥಿರಸ್ವತ್ತಿನ ಹರಾಜಿ ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧಪತ್ರಿಕೆ.

1. ಜೋಡಿ ಬಾಕೀದಾರರಾದ ಬಾಗಲೂರು ಗ್ರಾಮದ ಅಣ್ಣಪ್ಪನಿಂದ ಬರಬೇಕಾದ ಜಮೀನ್ ಕಂದಾಯದ ಬಾಕೀಗಾಗಿ ಇದರಡಿ ನಮೂದಾಗುವ ಸ್ಥಿರಸ್ವತ್ತು ಬೆಂಗಳೂರು ಡಿಸ್ಟ್ರಿಕ್ಟ ದೇವನಹಳ್ಳಿ ತಾಲ್ಲೂಕು ಜೋಡಿ ದಾಸನಾಯಿಕನಹಳ್ಳಿ ಗ್ರಾಮವನ್ನು 1904ನೆ ಇಸವಿ ಡಿಸೆಂಬರ 23ನೆ ತಾರೀಖಿನಲ್ಲಿ ದೇವನಹಳ್ಳಿ ತಾಲ್ಲೂಕು ಕಛೇರಿಯಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟಿ ಇದೆ.

ಹರಾಜು ಆ ದಿವಸ ದಿವಿ 12 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ ಜಾಸ್ತಿ ಬಾನ್ಸುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1903–1904ನೆ ಸಾಲಿಗೆ ಪೂರ್ತಿಯಾಗಿ * ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಪ್ಸೀಲ್ ಮೇರೆಗೆ ರೂಪಾಯಿ 70—3—8 ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜ್‌ದಾರನು ಹರಾಜ್ ಮೊಬಲಗಿನ ಶೇಕಡಾ 25 ರೂಪಾಯಿಗಳನ್ನ ಡಿಪಾಜಿಟ್ಟು ಹಾಜರ್ಮಾಡಬೇಕಾಗಿರುತ್ತೆ. ಅದು ಜ. ಲಾ ಹರಾಜು ಬಾಬತು ಬಾಕೀ ಮೊಬಲಗು ಹರಾಜು ತಾರೀಖು ಲಾಗಾಯಿತು 15 ದಿವಸಗಳಲ್ಲಿ ಪಾವತಿ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ಟು ಮೊಬಲಗನ್ನ ಹಾಜರ್ಮಾಡಿದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ಟು ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕಿ ಮೊಬಲಗು ಪಾವತಿ ಮಾಡಲ್ಪಡದೇ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಃ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸವಾಲ್ ಮಾಡತಕ್ಕ ಜನಗಳು ಖುದ್ದು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೆಯೋ ಯಾ ಏಜಂಟು ಯಾ ಮುಖಾಲೀಕರಾಗಿ ಸವಾಲ್ ಮಾಡುತ್ತಾರೆಯೋ ಎಂಬ ಅಂಶವನ್ನ ತಿಳಿಸಬೇಕೆಂತಲೂ, ಇತರರಿಗೋಸ್ಕರ ಮುಖಾಲೀಕರಾಗಿ ಸವಾಲ್ ಮಾಡುವ ಸಂದರ್ಭದಲ್ಲಿ ಅಂಥಾ ತಮ್ಮ ಯಜಮಾನರಿಂದ ಸಹಿ ಮಾಡಲ್ಪಟ್ಟ ಲಿಖಿತವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡುವಂತೆಯೂ ಕೇಳಲ್ಪಡಬಹುದು. ಅದನ್ನ ಅವರು ಹಾಜರ್ಮಾಡದೆ ಹೋದಲ್ಲಿ ಅವರ ಸವಾಲುಗಳು ತಿರಸ್ಕರಿಸಲ್ಪಡಬಹುದು.

6. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕೀದಾರನಾಗಲೀ ಆತನ ತರಫಿನವನಾಗಿ ಪ್ರಮಾಣಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲೀ ಬಾಕೀಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ, ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

7. ಹರಾಜು ಡೆಪ್ಯುಟಿ ಕಮೀಷನರವರಿಂದ ಮಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

8. ಹರಾಜಿನಲ್ಲಿ ತೆಗದುಕೊಂಡವರು ಹರಾಜ್ ಮೊಬಲಗನ್ನ ಪೂರ್ತಿಯಾಗಿ ಪಾವತಿ ಮಾಡಿದ ಮೇಲೆ ಡೆಪ್ಯುಟಿ ಕಮೀಷನರವರಿಂದ ಹರಾಜು ಮಂಜೂರ್ಮಾಡಲ್ಪಟ್ಟ ಕೂಡ್ಲೆ, ಹರಾಜುದಾರ್ರು ಸದರೀ ಸ್ವತ್ತಿನ ಸ್ವಾಧೀನವನ್ನ ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು ಡೆಪ್ಯುಟಿ ಕಮೀಷನರವರಿಂದ ಸಹಿ ಮೊಹರ್ ಮಾಡಲ್ಪಟ್ಟ ಒಂದು ಹರಾಜ್ ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯೂ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಖಾಲಿತ್ಯಗಳಿಗೆ ಗವರ್ನಮೆಂಟಿನವರು ಜವಾಬ್ದಾರರಲ್ಲವೆಂಬ ಅಂಶವನ್ನ ಸ್ಪಷ್ಟವಾಗಿ ತಿಳಿದಿರತಕ್ಕದ್ದು.

9. ಹರಾಜಿನಿಂದ ತಮಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜ್ ತಾರೀಖು ಲಾಗಾಯಿತು 30 ದಿವಸಗಳಲ್ಲಿ ಡೆಪ್ಯುಟಿ ಕಮೀಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕನೂನಿನಿಂದ ವಿಧಿಸಲ್ಪಟ್ಟ ಮಾಯಿದೆಯಲ್ಲಿ ಗವರ್ನಮೆಂಟಿನವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪ್ಪೀಲಿನಲ್ಲಿ ಆಗುವ ಫೈನಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು :—

ತಾಲ್ಲೂಕು.	ಹೋಬಳಿ.	ಗ್ರಾಮ.	ಬಾಕೀದಾರ್ರ ಹೆಸರು.	ಸ್ವತ್ತಿನ ತಪ್ಸೀಲ್.										ಸರ್ಕಾರಕ್ಕೆ ಬರಬೇಕಾದ ನೋಟೀಸ್ ಫೀ ವಗೈರೆ ಸಹಿತವಾದ ಬಾಕಿ ಮೊಬಲಗು.			
				ಕಟ್ಟಡಗಳು.				ಜಮೀನು.									
				ಕಟ್ಟಡದ ಹೆಸರು.	ಅಂದಾಜು ಕಿಮ್ಮತ್ತು.			ನಂಬರ್ ಅಥವಾ ಜಮೀನಿನ ಹೆಸರು.	ಖುಷ್ಕಿ, ತರೀ ಅಥವಾ ಬಾಗಾಯತು.	ವಿಸ್ತೀರ್ಣ.		ಆಕಾರ.						
					ರೂ.	ಆ.	ಪೈ.			ಎ.	ಗು.	ರೂ.	ಆ.	ಪೈ.	ರೂ.	ಆ.	ಪೈ.	
ದೇವನಹಳ್ಳಿ	ಜಾಲ	ದಾಸನಾಯಿಕನಹಳ್ಳಿ	ಅಣ್ಣಪ್ಪ	ಪೂರಾ ಗ್ರಾಮ	100	0	0	ಗ್ರಾಮ ಪೂರಾ	ಪರಂಪೋಕು.	298	3	4	12	0	68	11	8	ಬಾಕಿ
									ಖುಷ್ಕಿ	203	22	77	7	0	1	8	0	ಪ್ರೋಸೆಸ್ ಫೀ
									ತರಿ ..	11	12	36	4	0				
									ಬಾಗಾಯತು.	1	34	8	0	0	70	3	8	ಜುಮ್ಲಾ
									ಜುಮ್ಲಾ ..	514	31	126	7	0				

ಚೆಕ್ಕು ಬಂದಿ.

1 ಪೂರ್ವಕ್ಕೆ—ಜೋಡಿ ಮಾಳಕುಂಟೆ
1 ಪಶ್ಚಿಮಕ್ಕೆ—ಮಾರೇನಹಳ್ಳಿ ಎಲ್ಲೆ
1 ಉತ್ತರಕ್ಕೆ—ಮಹದೇವ ಕೊಡಿಗೆಹಳ್ಳಿ
1 ದಕ್ಷಿಣಕ್ಕೆ—ಮಾರೇನಹಳ್ಳಿ ಎಲ್ಲೆ

---

* ಯಾ ಬಾಕಿ ಇರುವ ಮಟ್ಟಿಗೆ ಸಂದರ್ಭಾನುಸಾರ ನಮೂದಿಸತಕ್ಕದ್ದು.

315

1755

ಸ್ಥಿರಸ್ವತ್ತಿನ ಹರಾಜು ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧಪತ್ರಿಕೆ.

1. ಗುತ್ತಾ ಬಾಕೀದಾರನಾದ ದೇವನಹಳ್ಳಿ ಗ್ರಾಮದ ವೆಂಕಟಸುಬ್ಬರಾವ್ ಇಂದ ಬರಬೇಕಾದ ಜಮೀನ್ ಕಂದಾಯದ ಬಾಕೀಗಾಗಿ ಇದರಡಿ ನಮೂದಾಗುವ ಸ್ಥಿರಸ್ವತ್ತು ಬೆಂಗಳೂರು ಡಿಸ್ಟ್ರಿಕ್ಟು ದೇವನಹಳ್ಳಿ ತಾಲ್ಲೂಕು ಖಾಯಂ ಗುತ್ತಾ ಅರಕಿನಕುಂಟೆ ಗ್ರಾಮವನ್ನು ಸನ್ 1904ನೆ ಇಸವಿ ಡಿಸೆಂಬರ್ 23ನೆ ತಾರೀಖಿನಲ್ಲಿ ದೇವನಹಳ್ಳಿ ತಾಲ್ಲೂಕು ಕಛೇರಿಯಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟು ಇದೆ.

ಹರಾಜು ಆ ದಿವಸ ದಿನ 12 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ ಚಡ ದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1902-03 & 03-04ನೆ ಸಾಲಿಗೆ ಪೂರ್ತಿಯಾಗಿ * ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಪ್ಶೀಲ್ ಮೇರಿಗೆ ರೂಪಾಯಿ 208—14—8 ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜ್‌ದಾರನು ಹರಾಜ್ ಮೊಬಲಗಿನ ಶೇಕಡಾ 25 ರೂಪಾಯಿಗಳನ್ನ ಡಿಪಾಜಿಟ್ಟು ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜು ಬಾಬತು ಬಾಕೀ ಮೊಬಲಗು ಹರಾಜ್ ತಾರೀಖು ಲಾಗಾಯಿತು 15 ದಿವಸಗಳಲ್ಲಿ ಪಾವತೀ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ಟು ಮೊಬಲಗನ್ನ ಹಾಜರ್ಮಾಡಿದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ಟು ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕೀ ಮೊಬಲಗು ಪಾವತಿ ಮಾಡಲ್ಪಡದೆ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಃ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸವಾಲ್ ಮಾಡತಕ್ಕ ಜನಗಳು ಖುದ್ದು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೆಯೋ ಯಾ ಏಜಂಟು ಯಾ ಮುತಾಲೀಕರಾಗಿ ಸವಾಲ್ಮಾಡುತ್ತಾರೆಯೋ ಎಂಬ ಅಂಶವನ್ನ ತಿಳಿಸಬೇಕೆಂತಲೂ, ಇತರರಿಗೋಸ್ಕರ ಮುತಾಲೀಕರಾಗಿ ಸವಾಲ್ಮಾಡುವ ಸಂದರ್ಭದಲ್ಲಿ ಅಂಥಾ ತಮ್ಮ ಯಜಮಾನರಿಂದ ಸಹಿ ಮಾಡಲ್ಪಟ್ಟ ಲಿಖಿತವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡುವಂತೆಯೂ ಕೇಳಲ್ಪಡಬಹುದು. ಅದನ್ನ ಅವರು ಹಾಜರ್ಮಾಡದೆ ಹೋದಲ್ಲಿ ಅವರ ಸವಾಲುಗಳು ತಿರಸ್ಕರಿಸಲ್ಪಡಬಹುದು.

6. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕೀದಾರನಾಗಲೀ ಆತನ ತರಫಿನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲೀ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ, ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

7. ಹರಾಜು ಡೆಪ್ಯುಟಿ ಕಮಿಷನರವರಿಂದ ಮಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

8. ಹರಾಜಿನಲ್ಲಿ ತೆಗದುಕೊಂಡವರು ಹರಾಜ್ ಮೊಬಲಗನ್ನ ಪೂರ್ತಿಯಾಗಿ ಪಾವತಿ ಮಾಡಿದ ಮೇಲೆ ಡೆಪ್ಯುಟಿ ಕಮಿಷನರವರಿಂದ ಹರಾಜು ಮಂಜೂರ್ಮಾಡಲ್ಪಟ್ಟ ಕೂಡ್ಲೆ, ಹರಾಜುದಾರ್ರು ಸದರೀ ಸ್ವತ್ತಿನ ಸ್ವಾಧೀನವನ್ನ ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು ಡೆಪ್ಯುಟಿ ಕಮಿಷನರವರಿಂದ ಸೈನ್ ಮೊಹರ್ ಮಾಡಲ್ಪಟ್ಟ ಒಂದು ಹರಾಜ್ ಸರಟಫಿಕೇಟ ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯೂ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಖಾಲಿತ್ಯಗಳಿಗೆ ಗವರ್ನಮೆಂಟನವರು ಜವಾಬ್‌ದಾರ್ರಲ್ಲವೆಂಬ ಅಂಶವನ್ನ ಸ್ಪಷ್ಟವಾಗಿ ತಿಳಿದಿರತಕ್ಕದ್ದು.

9. ಹರಾಜಿನಿಂದ ತಮಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜು ತಾರೀಖು ಲಾಗಾಯಿತು 30 ದಿವಸಗಳಲ್ಲಿ ಡೆಪ್ಯುಟಿ ಕಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾನೂನಿನಿಂದ ವಿಧಿಸಲ್ಪಟ್ಟ ಮಿಯಾದೆಯಲ್ಲಿ ಗವರ್ನಮೆಂಟನವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪ್ಪೀಲಿನಲ್ಲಿ ಆಗುವ ಫೈಸಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು :—

ತಾಲ್ಲೂಕು.	ಹೋಬಳಿ.	ಗ್ರಾಮ.	ಬಾಕೀದಾರರ ಹೆಸರು.	ಸ್ವತ್ತಿನ ತಪ್ಶೀಲ್.										ಸರ್ಕಾರಕ್ಕೆ ಬರಬೇಕಾದ ನೋಟಿಸ್ ಫೀ ವಗೈರೆ ಸಹಿತವಾದ ಬಾಕೀ ಮೊಬಲಗು.	
				ಕಟ್ಟಡಗಳು.		ಜಮೀನು.									
				ಕಟ್ಟಡದ ಹೆಸರು.	ಅಂದಾಜಾ ಕಿಮ್ಮತ್ತು.	ನಂಬರ ಅಥವಾ ಜಮೀನಿನ ಹೆಸರು.	ಖುಷ್ಕೀ, ತರೀ ಅಥವಾ ಬಾಗಾಯತು.	ವಿಸ್ತೀರ್ಣ.		ಆಕಾರ.					
					ರೂ. ಆ. ಪೈ.			ಎ.	ಗು.	ರೂ.	ಆ.	ಪೈ.		ರೂ. ಆ. ಪೈ.	
ದೇವನಹಳ್ಳಿ	ಜಾಲ	ಅರಕಿನಕುಂಟೆ	ವೆಂಕಟಸುಬ್ಬರಾವ್	ಪೂರಾಗ್ರಾಮ	300 0 0	ಗ್ರಾಮ ಪೂರಾ	ಖುಷ್ಕಿ	262	30	189	2	0		207 6 8	ಬಾಕಿ
							ತರಿ	18	29	78	0	0			
							ಬಾಗಾಯತು	10	14	57	8	0		1 8 0	ಪ್ರೋಸೆಸ್ ಫೀ.
							ಖರಾಬ್ ಪೋಂಕು	470	34	7	4	0		208 14 8	
							ಜುಮ್ಲಾ ...	762	27	331	14	0			

---

* ಯಾ ಬಾಕಿ ಇರುವ ಪಟ್ಟಿಗೆ ಸಂದರ್ಭಾನುಸಾರ ನಮೂದಿಸತಕ್ಕದ್ದು.

ಡಿ. ದೇವರಾಜೆ ಅರಸ್,
ಡೆಪ್ಯುಟಿ ಕಮಿಷನರ್.

ಕೋಲಾರ ಡಿಸ್ಟ್ರಿಕ್ಟು.

ತಾರೀಖು 2ನೆ ನವಂಬರ 1904ನೆ ಇಸವಿ.

ಮಾರ್ಜಿನ್ನಲ್ಲಿ ನಮೂದು ಮಾಡಿ ಇರತಕ್ಕ ಇನಾಂ ಗ್ರಾಮಗಳು, ಸರ್ಕಾರಕ್ಕೆ ಬರಬೇಕಾದ ಬಾಕೀ ಮೊಬಲಗಿಗೋಸ್ಕರವಾಗಿ, ತಾಲ್ಲೂಕು ಅಮಲ್ದಾರ್ರ ಕಛೇರಿಯಲ್ಲಿ 1904ನೆ ಇಸವಿ ಡಿಸೆಂಬರ ಮಾಹೆ 15ನೆ ತಾರೀಖಿನ ದಿವಸ ಬಹಿರಂಗವಾಗಿ ಹರಾಜು ಮಾಡಿಸಲ್ಪಡುತ್ತವೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟು ಇದೆ.

1. ಜೋಡಿ ವಡಗೂರು-ಹುತ್ತೂರು ಹೋಬಳಿ—ಕೋಲಾರ ತಾಲ್ಲೂಕು.
2. ಜೋಡಿ ದಂಡಿಗಾನಹಳ್ಳಿ-ವಕ್ಕಲೇರಿ ಹೋಬಳಿ—ಕೋಲಾರ ತಾಲ್ಲೂಕು.
3. ಜೋಡಿ ದೊಡ್ಡಗಾಂಡ್ಲಹಳ್ಳಿ-ಕ್ಯಾಸಂಬಳ್ಳಿ ಹೋಬಳಿ—ಬವರಿಂಗಪೇಟೆ ತಾಲ್ಲೂಕು.

(ಹೆಚ್ಚು ತಪಶೀಲ್ ಬಗ್ಗೆ 1904ನೆ ಮರ್ಕೂಂ 45ನೆ ನಂಬರ ಮೈಸೂರ ಗೆಜೆಟ್ಟಿನ 2ನೆ ಭಾಗದ 619-620-621-622ನೆ ನಂಬರು ಪೇಜು ನೋಡತಕ್ಕದ್ದು.)

ಕೆ. ಪಿ. ಪುಟ್ಟಣ್ಣ ಚೆಟ್ಟಿ,
ಡೆಪ್ಯುಟಿ ಕಮಿಷನರ್.

ಬೆಂಗಳೂರು ಡಿವಿಜನ್ ಡಿಸ್ಟ್ರಿಕ್ಟ್ ಜಡ್ಜರವರ ಕೋರ್ಟಿನಲ್ಲಿ.

ಸನ್ 1904--1905ನೆ ಇಸವಿ ಮಿ|| ಅರ್ಜೀ ನಂಬರ 110.

ಮೃತಪಟ್ಟ ಸೆಟ್ಲೂರು ರಾಮಸ್ವಾಮ್ಯೈಯ್ಯಂಗಾರ್ರ ಆಸ್ತೀ ವಿಷಯದಲ್ಲಿ—

ಅರ್ಜೀದಾರ್ರು 1ನೆ ಎಸ್. ವೆಂಕಟರಂಗ್ಯೈಯ್ಯಂಗಾರ್ರು, 2ನೆ ಎಸ್. ನರಸಿಂಹ್ಯೈಯ್ಯಂಗಾರ್ರು, 3ನೆ ಎಸ್. ಆರ್. ನರಸಿಂಹ್ಯೈಯ್ಯಂಗಾರ್ರು, 4ನೆ ಎಸ್. ಕೃಷ್ಣೈಯ್ಯಂಗಾರ್ರು ಎಂಬ ಅರ್ಜೀದಾರರು ಮೃತಪಟ್ಟ ಸದರೀ ಸೆಟ್ಲೂರು ರಾಮಸ್ವಾಮ್ಯೈಯ್ಯಂಗಾರ್ರಿಗೆ ಮುಖ್ಯ ವಾರಸುದಾರರು ಆಗಬೇಕೆಂಬ ಹಕ್ಕುದಾರಿ ಮೇಲೆ ಬೆಂಗಳೂರು ವಾಸಸ್ಥರಾಗಿ ಮೃತಪಟ್ಟ ಸದರೀ ಸೆಟ್ಲೂರು ರಾಮಸ್ವಾಮ್ಯೈಯ್ಯಂಗಾರ್ರ ಜಿಂದಗಿ ಬಗ್ಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ಮಾಡುವದಕ್ಕೆ ಸನ್ 1901ನೆ ಇಸವಿ 7ನೆ ರೆಗ್ಯುಲೇಷನ್ ಪ್ರಕಾರ ಸರ್ಟಿಫಿಕೇಟ್ ಬಗ್ಗೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಎಸ್. ವೆಂಕಟರಂಗ್ಯೈಯ್ಯಂಗಾರ್ರು ವಗೈರೇರ ಅರ್ಜಿಯನ್ನು ಸನ್ 1904ನೆ ಇಸವಿ ಡಿಸೆಂಬರ ತಿಂಗಳು ತಾರೀಖು 19ರಲ್ಲು ಕೇಳಿ ಸರ್ಟಿಫಿಕೇಟ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಸೆಟ್ಲೂರು ರಾಮಸ್ವಾಮ್ಯೈಯ್ಯಂಗಾರ್ರ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸನ್ 1904ನೆ ಇಸವಿ ನವೆಂಬರ ತಿಂಗಳು 15ನೆ ತಾರೀಖಿನಲ್ಲಿ ಕೋರ್ಟು ಮೊಹರನಿಶಿ ನನ್ನ ದಸ್ತುಖತ್ತೊಡನೆ ಕೊಡೋಣಾಗಿದೆ.

ಸನ್ 1904 - 1905ನೆ ಇಸವಿ ಮಿ|| ಅರ್ಜೀ ನಂಬರ 120.

ಮೃತಪಟ್ಟ ಸಿ. ಆರ್. ಕೃಷ್ಣಮೂರ್ತಿರಾಯರ ಆಸ್ತೀ ವಿಷಯದಲ್ಲಿ—

ಅರ್ಜೀದಾರ್ರು ಮದರಾಸ್ ಎಗ್ಮೋರ್ ಹೈರೋಡ್ 28ನೆ ನಂಬರನಲ್ಲಿರುವ ಸಿ. ಹಯವದನರಾವ್, ಬಿ. ಎ., ಯವರು, ಮೃತಪಟ್ಟ ಸದರೀ ಸಿ. ಆರ್. ಕೃಷ್ಣಮೂರ್ತಿರಾಯರಿಗೆ ಮುಖ್ಯ ವಾರಸ್‌ದಾರರು ಆಗಬೇಕೆಂಬ ಹಕ್ಕುದಾರಿ ಮೇಲೆ ಬೆಂಗಳೂರಿನಲ್ಲಿ ವಾಸಸ್ಥರಾಗಿ ಮೃತಪಟ್ಟ ಸದರೀ ಸಿ. ಆರ್. ಕೃಷ್ಣಮೂರ್ತಿರಾಯರ ಜಿಂದಗಿ ಬಗ್ಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ ಸನ್ 1901ನೆ ಇಸವಿ 7ನೆ ರೆಗ್ಯುಲೇಷನ್ ಪ್ರಕಾರ ಸರ್ಟಿಫಿಕೇಟ್ ಬಗ್ಗೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಸಿ. ಹಯವದನರಾಯರ ಅರ್ಜಿಯನ್ನು ಸನ್ 1904ನೆ ಇಸವಿ ಡಿಸೆಂಬರು ತಿಂಗಳು ತಾರೀಖು 19ರಲ್ಲು ಕೇಳಿ ಸರ್ಟಿಫಿಕೇಟ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಸಿ. ಆರ್. ಕೃಷ್ಣಮೂರ್ತಿರಾಯರ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸನ್ 1904ನೆ ಇಸವಿ ನವೆಂಬರ ತಿಂಗಳು 15ನೆ ತಾರೀಖಿನಲ್ಲಿ ಕೋರ್ಟು ಮೊಹರ್ ನಿಶಿ ನನ್ನ ದಸ್ತುಖತ್ತೊಡನೆ ಕೊಡೋಣಾಗಿದೆ.

ಎಸ್. ಆರ್. ಸುಬ್ರಾಯ ಅಯ್ಯರ್,
ಡಿಸ್ಟ್ರಿಕ್ಟ್ ಜಡ್ಜ್.

ಶಿವಮೊಗ್ಗಾ ಡಿಸ್ಟ್ರಿಕ್ಟು ಜಡ್ಜರವರ ಕೋರ್ಟಿನಲ್ಲಿ.

ಸನ್ 1904—1905ನೆ ಇಸವಿ ಮಿ|| ಅರ್ಜೀ ನಂಬರ 53.

ಮೃತಪಟ್ಟ ಲೇಟ್ ಕ್ಯಾ| ನಾಗಸಮುದ್ರದ ಭೀಮಣ್ಣ ಎಂಬುವರ ಆಸ್ತೀ ವಿಷಯದಲ್ಲಿ —

ಅರ್ಜೀದಾರ್ರು 1. ಹನುಮಂತರಾಯ, 2. ಪಾಂಡುರಂಗರಾಯ ಎಂಬುವರು, ಮೃತಪಟ್ಟ ಸದರೀ ಭೀಮಣ್ಣನವರಿಗೆ ಮಕ್ಕಳು ಆಗಬೇಕೆಂಬ ಹಕ್ಕುದಾರಿ ಮೇಲೆ ಮೊಳಕಾಲಮೂರು ತಾಲ್ಲೂಕು ನಾಗಸಮುದ್ರದ ಸ್ಥಳದ 1. ಹನುಮಂತರಾಯ, 2. ಪಾಂಡುರಂಗರಾಯ ಎಂಬುವರು ನಾಗಸಮುದ್ರ ವಾಸಸ್ಥರಾಗಿ ಮೃತಪಟ್ಟ ಭೀಮಣ್ಣನವರ ಜಿಂದಗಿ ಬಗ್ಗ್ಯಾಗಿ ಬರತಕ್ಕ 744-8-3 ರೂಪಾಯಿಗಳ ಸಾಲವನ್ನು ವಸೂಲ್ ಮಾಡುವದಕ್ಕೆ ಸನ್ 1901ನೆ ಇಸವಿ VIIನೆ ರೆಗ್ಯುಲೇಷನ್ ಮೇರೆಗೆ ಸರ್ಟಿಫಿಕೇಟ್ ಬಗ್ಗೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.